**1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಾಮರಾಜನಗರ,**
**ಪೀಠಾಸೀನ ಕೊಳ್ಳೇಗಾಲ**

**ಎಸ್.ಸಿ. 5005/2026**

| | | | |
|---|---|---|---|
| **ಸಾಕ್ಷಿದಾರರ ಹೆಸರು** | : | ಚಿನ್ನಪ್ಪ | **ಪ್ರಮಾಣ ವಚನ ಭೋಧಿಸಿದ ದಿನಾಂಕ** |
| **ತಂದೆ ಹೆಸರು** | : | ಚಿಕ್ಕಮಾರಯ್ಯ | **15.07.2026** |
| **ವಯಸ್ಸು** | : | 44 ವರ್ಷ | |
| **ವೃತ್ತಿ** | : | ಪೋಲೀಸ್ ಮುಖ್ಯ ಪೇದೆ, ಕೊಳ್ಳೇಗಾಲ ಗ್ರಾಮಾಂತರ ಪೊ.ಠಾಣೆ | **ಪ್ರಾ.ಸಾಃ 09** |
| **ವಾಸ ಸ್ಥಳ** | : | ಕೊಳ್ಳೇಗಾಲ | **ಚಾ.ಸಾಃ 12** |

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ-**

**ನಾನು 2022 ರಿಂದ ಮುಖ್ಯ ಪೇದೆ ಆಗಿ ಕೊಳ್ಳೇಗಾಲ ಗ್ರಾಮಾಂತರ ಪೊ.ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.**

ದಿಃ 13.06.2025 ರಂದು ಬೆಳಗ್ಗೆ 9.50 ಗಂಟೆ ಸಮಯದಲ್ಲಿ ಆಸ್ಪತ್ರೆಯಿಂದ ಬಂದ ಮಾಹಿತಿ ಮೇರೆಗೆ ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಗೆ ತೆರಳಿ ಅಲ್ಲಿ ದಾಖಲಾಗಿದ್ದ ಚಾಸಾ 1 ರವರ ಹೇಳಿಕೆಯನ್ನು ಮಾಡಿಕೊಂಡಿರುತ್ತೇನೆ. ವೈದ್ಯರ ಸಮಕ್ಷಮ ಚಾಸಾ 1 ರವರ ಹೇಳಿಕೆಯನ್ನು ಮಾಡಿಕೊಂಡಿರುತ್ತೇನೆ. ನಂತರ ಠಾಣಾ ಮೊಕದ್ದಮೆ ಸಂಖ್ಯೆ 140/2025 ರಲ್ಲಿ ಪ್ರಕರಣವನ್ನು ನೊಂದಾಯಿಸಿರುತ್ತೇನೆ. ಪಿರ್ಯಾದಿಯನ್ನು ನಿಪಿ 1 ಎಂದು ಈಗಾಗಲೇ ಗುರುತಿಸಲಾಗಿದೆ. ಸಾಕ್ಷಿ ಸಹಿಯನ್ನು ನಿಪಿ 1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ವೈದ್ಯರ ಸಹಿಯನ್ನು ಗುರುತಿಸಿದ್ದು, ಸಹಿಯನ್ನು ನಿಪಿ 1(ಸಿ)

ಎಂದು ಗುರುತಿಸಲಾಯಿತು. ಪ್ರ.ವರದಿಯನ್ನು ನಿಪಿ 10 ಎಂದು, ಸಾಕ್ಷಿ ಸಹಿಯನ್ನು ನಿಪಿ 10(ಎ) ಎಂದು ಗುರುತಿಸಲಾಯಿತು. ಎಂ.ಎಲ್.ಸಿ ಯನ್ನು ನಿಪಿ 11 ಎಂದು, ಸಾಕ್ಷಿ ಸಹಿಯನ್ನು ನಿಪಿ 11(ಎ) ಎಂದು ಗುರುತಿಸಲಾಯಿತು. ಆರೋಪಿಯ ಪತ್ತೆಗಾಗಿ ಸಿಬ್ಬಂದಿಯವರನ್ನು ನೇಮಕ ಮಾಡಿರುತ್ತೇನೆ. ಸಿಬ್ಬಂದಿಯವರು ಆರೋಪಿಯನ್ನು ಮದ್ಯಾಹ್ನ 2.00 ಗಂಟೆಗೆ ಹಾಜರುಪಡಿಸಿರುತ್ತಾರೆ, ನಾನು ಆರೋಪಿಯ ದಸ್ತಗಿರಿ ಕ್ರಮ ಅನುಸರಿಸಿ ಆತತನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ. ಮುಂದಿನ ತನಿಖೆಯನ್ನು ಚಾಸಾ 13 ರವರು ವಹಿಸಿಕೊಂಡಿರುತ್ತಾರೆ. ಸಾಕ್ಷಿ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ- ಶ್ರೀ ಬಿ.ಎಸ್.ಆರ್ ವಕೀಲರಿಂದ**

ಚಾಸಾ 1 ರವರ ಗಂಡ ನಮ್ಮ ಇಲಾಖೆಯಲ್ಲಿ ಕೆಲಸ ಮಾಡುತ್ತಿದ್ದಾರೆ, ಅವರಿಗೆ ಸಹಾಯವಾಗಲೀ ಎಂದು ಸುಳ್ಳು ದೂರು ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಾಮರಾಜನಗರ, ಪೀಠಾಸೀನ ಕೊಳ್ಳೇಗಾಲ